ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳಲ್ಲಿ ಬ್ಯಾಕ್‌ಲಾಗ್ ಹುದ್ದೆಗಳು

190 (351) ಶ್ರೀ ಬಿ ಸೋಮಶೇಖರ್ (ಮಳವಳ್ಳಿ) ಮಾನ್ಯ ಉನ್ನತ ಶಿಕ್ಷಣ ಮತ್ತು ವಾರ್ತಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಸರಿಯಾಗಿ ತುಂಬದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಬಂದಿದ್ದಲ್ಲಿ ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು

ಇ) ವಿವಿಧ ವಿಶ್ವವಿದ್ಯಾಲಯಗಳಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ತುಂಬಲು ಬೇರೆ ಬೇರೆ ಮಾನದಂಡಗಳೇನಾದರೂ ಇದೆಯೇ, ಇದ್ದಲ್ಲಿ ವಿವರಗಳನ್ನು ನೀಡುವುದು

ಈ) ಎಲ್ಲಾ ವಿಶ್ವವಿದ್ಯಾಲಯಗಳಲ್ಲೂ ಬ್ಯಾಕ್ ಲಾಗ್ ಹುದ್ದೆಗಳನ್ನು ತುಂಬಲು ಏಕರೂಪ ವ್ಯವಸ್ಥೆಯನ್ನು ರೂಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ,

ಉ) ಇದ್ದಲ್ಲಿ ಎಂದಿನಿಂದ ಜಾರಿಗೆ ತರಲಾಗುವುದು?

ಡಾ॥ ಜಿ ಪರಮೇಶ್ವರ್ (ಉನ್ನತ ಶಿಕ್ಷಣ ಮತ್ತು ವಾರ್ತಾ ಸಚಿವರು)

ಅ) ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸಿ 2000ದ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮದನ್ವಯ ಸರಿಯಾಗಿ ತುಂಬಲಾಗುತ್ತಿತ್ತು ಆದರೆ ಬ್ಯಾಕ್‌ಲಾಗ್ ಹುದ್ದೆಗಳನ್ನು ತುಂಬುವ ಬಗ್ಗೆ ರಚಿಸಲಾಗಿದ್ದ ಸಚಿವ ಸಂಪುಟದ ಉಪ ಸಮಿತಿಯು ಅಧಿಸೂಚನೆ ಸಂಖ್ಯೆ ಸಿಆಸುಇ 13 ಎಸ್‌ಟಿಸಿ 2001 ದಿನಾಂಕ 21 11 2001 ರಂದು ಹೊರಿಸಲಾದ ಬ್ಯಾಕ್‌ಲಾಗ್ ಹುದ್ದೆಗಳನ್ನು ತುಂಬುವ ನಿಯಮಗಳ ಪ್ರಕಾರವೇ ತುಂಬಲು ಸೂಚಿಸಿದ್ದಾರ ಹಿನ್ನೆಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯೊಂದಿಗೆ ಸಮಾಲೋಚಿಸಲಾಗಿದ್ದು, ಸಮಾಜ ಕಲ್ಯಾಣ ಇಲಾಖೆಯು, ಕರ್ನಾಟಕ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಬ್ಯಾಕ್‌ಲಾಗ್ ಹುದ್ದೆಗಳನ್ನು ತುಂಬುವ ನಿಯಮಗಳನ್ನು ವಿಶ್ವವಿದ್ಯಾಲಯಗಳಿಗೂ ಅನ್ವಯವಾಗುವಂತೆ ತಿದ್ದುಪಡಿಯನ್ನು ಮಾಡಲು ಕ್ರಮ ಕೈಗೊಳ್ಳುತ್ತಿದೆ

ಆ) ಅನ್ವಯಿಸುವುದಿಲ್ಲ

ಇ) ಇಲ್ಲ

ಈ) ಅನ್ವಯಿಸುವುದಿಲ್ಲ

ಉ) ಅನ್ವಯಿಸುವುದಿಲ್ಲ

ಬೆಂಗಳೂರು ನಗರದ ಪರಿಸರ ಸಂರಕ್ಷಣೆ

191 (512) ಶ್ರೀ ಸುಬ್ಬಾರೆಡ್ಡಿ ಕೆ ಎನ್ (ಬಸವನಗುಡಿ) ಮಾನ್ಯ ವೈದ್ಯಕೀಯ ಶಿಕ್ಷಣ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ದಿನೇ ದಿನೇ ಪರಿಸರ ಹದಗೆಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಮಾರ್ಗೋಪಾಯಗಳೇನು?

ಡಾ॥ ಎ ಬಿ ಮಾಲಕರೆಡ್ಡಿ (ವೈದ್ಯಕೀಯ ಶಿಕ್ಷಣ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು)

ಅ) ಇಲ್ಲ

ಆ) ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆ ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಸುಧಾರಿಸಲು ಈ ಕೆಳಗಿನ ಕ್ರಮಗಳನ್ನು ಕೈಗೊಂಡಿರುತ್ತವೆ